# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತನಾಲ್ಕನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಸೋಮವಾರ, ದಿನಾಂಕ:20ನೇ ಸೆಪ್ಟೆಂಬರ್, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆಗಳು:</u>**

| | |
|---|---|
| 01) 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 01 (203) | ಮಾನ್ಯ ಅರಣ್ಯ, ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು |
| 02) 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ನಸೀರ್ ಅಹ್ಮದ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 10 (117)<br>03) 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಅಲ್ಲಂ ವೀರಭದ್ರಪ್ಪ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 03 (214)<br>04) 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎನ್.ರವಿಕುಮಾರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 02 (28)<br>05) 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀಮತಿ ಭಾರತಿ ಶೆಟ್ಟಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 14 (195)<br>06) 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 08 (122) | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |
| 07) 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಸ್.ಎಲ್.ಭೋಜೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 13 (222)<br>08) 5ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ.ಸಿ.ಕೊಂಡಯ್ಯ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 67 (662) | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

..2..

## 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಬೆಂಗಳೂರು ನೀರು ಸರಬರಾಜು ಮತ್ತು ಗ್ರಾಮಸಾರ ಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕ, 2021
02. ಕರ್ನಾಟಕ ಕೃಷಿ ಸಂಬಂಧಿ ಕೀಟಗಳು ಮತ್ತು ರೋಗಗಳ (ತಿದ್ದುಪಡಿ) ವಿಧೇಯಕ, 2021
03. ಬಂದಿಗಳ ಗುರುತಿಸುವಿಕೆ (ಕರ್ನಾಟಕ ತಿದ್ದುಪಡಿ) ವಿಧೇಯಕ. 2021
04. ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ. 2021
05. ಕರ್ನಾಟಕ ಬಂದೀಖಾನೆ ಅಭಿವೃದ್ಧಿ ಮಂಡಳಿ ವಿಧೇಯಕ, 2021

## 3. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಬೆಂಗಳೂರು ನೀರು ಸರಬರಾಜು ಮತ್ತು ಗ್ರಾಮಸಾರ ಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕ, 2021

**ಶ್ರೀ ಬಸವರಾಜ ಬೊಮ್ಮಾಯಿ ( ಮಾನ್ಯ ಮುಖ್ಯಮಂತ್ರಿಗಳು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಬೆಂಗಳೂರು ನೀರು ಸರಬರಾಜು ಮತ್ತು ಗ್ರಾಮಸಾರ ಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಕೃಷಿ ಸಂಬಂಧಿ ಕೀಟಗಳು ಮತ್ತು ರೋಗಗಳ (ತಿದ್ದುಪಡಿ) ವಿಧೇಯಕ, 2021

**ಶ್ರೀ ಬಿ.ಸಿ. ಪಾಟೀಲ್ (ಮಾನ್ಯ ಕೃಷಿ ಸಚಿವರು)** ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಕೃಷಿ ಸಂಬಂಧಿ ಕೀಟಗಳು ಮತ್ತು ರೋಗಗಳ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03 ಬಂದಿಗಳ ಗುರುತಿಸುವಿಕೆ (ಕರ್ನಾಟಕ ತಿದ್ದುಪಡಿ) ವಿಧೇಯಕ. 2021

**ಶ್ರೀ ಅರಗ ಜ್ಞಾನೇಂದ್ರ ( ಮಾನ್ಯ ಗೃಹ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಬಂದಿಗಳ ಗುರುತಿಸುವಿಕೆ (ಕರ್ನಾಟಕ ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ. 2021

**ಶ್ರೀ ಅರಗ ಜ್ಞಾನೇಂದ್ರ ( ಮಾನ್ಯ ಗೃಹ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. ಕರ್ನಾಟಕ ಬಂದೀಖಾನೆ ಅಭಿವೃದ್ಧಿ ಮಂಡಳಿ ವಿಧೇಯಕ, 2021

**ಶ್ರೀ ಅರಗ ಜ್ಞಾನೇಂದ್ರ ( ಮಾನ್ಯ ಗೃಹ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಬಂದೀಖಾನೆ ಅಭಿವೃದ್ಧಿ ಮಂಡಳಿ ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರ ಕಾರ್ಯಭಾರವನ್ನು ದಿನಾಂಕ:20.02.2017ರ ಸುತ್ತೋಲೆಯಲ್ಲಿ ನಿಗದಿಪಡಿಸಿರುವುದರಿಂದ ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಉಂಟಾಗಿರುವ ತೊಂದರೆ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

೦2. **ಶ್ರೀಯುತರುಗಳಾದ ಆಯನೂರು ಮಂಜುನಾಥ್, ಎಸ್.ವ್ಹಿ. ಸಂಕನೂರ, ಮರಿತಿಬ್ಬೇಗೌಡ ಹಾಗೂ ಪುಟ್ಟಣ್ಣ** ಅವರುಗಳು ಖಾಸಗಿ ಅನುದಾನಿತ ಹಾಗೂ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ದಿನಾಂಕ:01.04.2006ರ ಪೂರ್ವದ ಸೇವೆಯನ್ನು ಪರಿಗಣಿಸದೆ ಇರುವುದರಿಂದ ಸದರಿ ನೌಕರರು ಪಿಂಚಣಿ ಸೌಲಭ್ಯದಿಂದ ವಂಚಿತರಾಗುತ್ತಿರುವ ಕಾರಣದಿಂದ ಉಚ್ಚ ನ್ಯಾಯಾಲಯ ಹಾಗೂ ಸರ್ವೋಚ್ಚ ನ್ಯಾಯಾಲಯಗಳ ತೀರ್ಪಿನನ್ವಯ ನೌಕರರು ಸೇವೆಗೆ ಸೇರಿದ ದಿನಾಂಕದಿಂದ ನಿವೃತ್ತಿವರೆಗಿನ ವೇತನವನ್ನು ನಿಗದಿಪಡಿಸುವುದರ ಜೊತೆಗೆ ಹಳೆಯ ನಿಶ್ಚಿತ ಪಿಂಚಣಿ (OPS) ಸೌಲಭ್ಯವನ್ನು ಒದಗಿಸುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

೦3. **ಶ್ರೀಮತಿ ಎಸ್. ವೀಣಾ ಅಚ್ಚಯ್ಯ** ಅವರು ಕೊಡಗು ಜಿಲ್ಲೆಯ ಭೂಹಿಡುವಳಿದಾರರು ಜಮ್ಮಾ ಮಲೆಗಳ ಮೇಲಿನ ಹಕ್ಕನ್ನು ಬಿಟ್ಟುಕೊಡಲು ಸಿದ್ದರಿದ್ದರೂ ಕೂಡ ಸರ್ಕಾರ ಸೂಕ್ತ ಪರಿಹಾರ ನೀಡದೆ ಇರುವುದರಿಂದ ಭೂಹಿಡುವಳಿದಾರರು ಸಂಕಷ್ಟಕ್ಕೆ ಸಿಲುಕಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

೦4. **ಶ್ರೀ ಆರ್. ಪ್ರಸನ್ನ ಕುಮಾರ್** ಅವರು ಕರ್ನಾಟಕ ಪೌರಸಭೆಗಳ ಅಧಿನಿಯಮ ಮತ್ತು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ ತಿದ್ದುಪಡಿಯಾದ ರೀತ್ಯಾ 2021-2022ನೇ ಸಾಲಿನ ನಗರ ಸ್ಥಳೀಯ ಸಂಸ್ಥೆಗಳ ಆಸ್ತಿ ತೆರಿಗೆಯನ್ನು ಹಿಂದಿನ ಸಾಲುಗಳಿಗಿಂತ ದುಪ್ಪಟ್ಟು ಜಾಸ್ತಿ ಮಾಡಿರುವುದರಿಂದ ವಿವಿಧ ಜಿಲ್ಲೆಗಳಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಹಾಗೂ ಕೊಳಚೆ ಪ್ರದೇಶದಲ್ಲಿ ವಾಸ ಮಾಡುವ ಕಡು ಬಡವರು ಸಂಕಷ್ಟಕ್ಕೊಳಗಾಗಿರುವ ಕುರಿತು ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

..4..

## 05. ನಿಯಮ 330ರ ಮೇರೆಗೆ

01. **ಶ್ರೀ ಎಂ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು,** ಅವರು ಡಾ.ಕೆ.ಶಿವರಾಮ್ ಕಾರಂತ್ ಬಡಾವಣೆ ನಿರ್ಮಾಣಕ್ಕಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸ್ವಾಧೀನಪಡಿಸಿಕೊಳ್ಳಲಾಗಿರುವ 3546 ಎಕರೆ 12 ಗುಂಟೆ ಜಮೀನಿಗೆ ಭೂ ಸ್ವಾಧೀನ ಕಾಯ್ದೆಯಡಿ ರೈತರುಗಳು ಸಲ್ಲಿಸಿರುವ ಆಕ್ಷೇಪಣೆಗಳಿಗೆ ಉತ್ತರವನ್ನು ನೀಡದೆ ಐತೀರ್ಪು ಮಾಡಲು ಉದ್ದೇಶಿಸಿರುವುದರಿಂದ ರೈತರಿಗೆ ಅನ್ಯಾಯವಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಎಸ್.ಆರ್.ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು,** ಅವರು ಉತ್ತರ ಕರ್ನಾಟಕ ಭಾಗದ ಅನೇಕ ಖಾಸಗಿ ಸಕ್ಕರೆ ಕಾರ್ಖಾನೆಗಳು ನಷ್ಟ ಅನುಭವಿಸುತ್ತಿದ್ದು, ಸದರಿ ಸಕ್ಕರೆ ಕಾರ್ಖಾನೆಗಳಿಗೆ ಆರ್ಥಿಕ ನೆರವು ನೀಡಿದಂತಹ ಸಹಕಾರಿ ಬ್ಯಾಂಕ್‌ಗಳು ಸಹ ದುಸ್ಥಿತಿಗೆ ಬಂದಿರುವುದರಿಂದ ಕಬ್ಬು ಬೆಳೆಗಾರರ ಪರಿಸ್ಥಿತಿ ದುಸ್ತರವಾಗಿದ್ದು, ಕಬ್ಬು ಬೆಳೆಗಾರರ ಹಾಗೂ ಸಹಕಾರಿ ಬ್ಯಾಂಕ್‌ಗಳನ್ನು ಸುಸ್ಥಿತಿಗೆ ತರುವ ಸಂಬಂಧವಾಗಿ ಸೂಕ್ತ ಮಾರ್ಗೋಪಾಯಗಳನ್ನು ಕಂಡುಕೊಳ್ಳುವ ಕುರಿತು ಪ್ರಸ್ತಾಪಿಸುವುದು.

03. **ಶ್ರೀಯುತರುಗಳಾದ ಕೆ.ಟಿ.ಶ್ರೀಕಂಠೇಗೌಡ, ಮರಿತಿಬ್ಬೇಗೌಡ, ಎಸ್.ವ್ಹಿ. ಸಂಕನೂರ ಹಾಗೂ ಅರುಣ ಶಹಾಪೂರ** ಅವರುಗಳು ದಿನಾಂಕ:02.02.2000ರ ಪೂರ್ವದಲ್ಲಿ ಖಾಸಗಿ ಅನುದಾನಿತ ಪ್ರೌಢ ಶಾಲೆಯಲ್ಲಿ 15-20 ವರ್ಷಗಳಿಂದ ಸೇವೆ ಸಲ್ಲಿಸಿರುವ "ಡಿ" ಗುಂಪು ನೌಕರರನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀ ಪುಟ್ಟಣ್ಣ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಸರ್.ಎಂ. ವಿಶ್ವೇಶ್ವರಯ್ಯ 2ನೇ ಹಂತ ಬಡಾವಣೆ ರಚನೆಗಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಬೆಂಗಳೂರು ಉತ್ತರ ತಾಲ್ಲೂಕಿನ ಯಶವಂತಪುರ ಹೋಬಳಿಯ ಉಲ್ಲಾಳ ಗ್ರಾಮದಲ್ಲಿ ವಶಪಡಿಸಿಕೊಂಡಿರುವ ಜಮೀನುಗಳ ಭೂ ಮಾಲೀಕರಿಗೆ ಪರಿಹಾರ ನೀಡದಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

05. **ಶ್ರೀ ಪಿ.ಆರ್. ರಮೇಶ್** ಅವರು 2011ರಲ್ಲಿ 362 ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯ ವಿಳಂಬ ನೀತಿಗೆ ಕಾರಣವಾದ ಸಂವಿಧಾನಿಕ ಬಿಕ್ಕಟ್ಟಿನಿಂದಾಗಿ ಕಳೆದ 10 ವರ್ಷಗಳಿಂದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹುದ್ದೆಗಳು ಖಾಲಿ ಇದ್ದು ಸರ್ಕಾರದ ಆಡಳಿತಕ್ಕೆ ಧಕ್ಕೆ ಉಂಟಾಗಿರುವುದಲ್ಲದೆ ಸಾರ್ವಜನಿಕರಿಗೆ ತೀವ್ರ ಅನಾನುಕೂಲವಾಗಿರುವ ಕುರಿತು ಪ್ರಸ್ತಾಪಿಸುವುದು.

## 06. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಮತಿ ಭಾರತಿ ಶೆಟ್ಟಿ ಹಾಗೂ ಡಾ. ವೈ.ಎ. ನಾರಾಯಣಸ್ವಾಮಿ** ಅವರುಗಳು | ರಾಜ್ಯದಲ್ಲಿ ಮಕ್ಕಳು ಹಾಗೂ ಮಹಿಳೆಯರ ಮೇಲೆ ನಡೆಯುತ್ತಿರುವ ಅತ್ಯಾಚಾರ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**